ಬೆಂಗಳೂರು ನಗರಕ್ಕೆ ಬರುತ್ತಿರುವ ಈರೋಡ್ ಹಾಲನ್ನು ತಡೆಗಟ್ಟುವುದರ ಕುರಿತು

3176 - ಶ್ರೀ ಕೆ.ಎನ್. ಸುಬ್ಬಾರೆಡ್ಡಿ (ಬಸವನಗುಡಿ) : ಮಾನ್ಯ ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಕಲಬೆರಕೆ ಮಿಶ್ರಿತ ಈರೋಡ್ ಹಾಲನ್ನು ಬೆಂಗಳೂರು ನಗರದಲ್ಲಿ ಮಾರದಂತೆ ತಡೆಗಟ್ಟುವುದಾಗಿ ಮಾನ್ಯ ಮಂತ್ರಿಗಳು ಭರವಸೆ ನೀಡಿದ್ದಾಗಿಯೂ ಅವ್ಯಾಹತವಾಗಿ ಬೆಂಗಳೂರಿನಲ್ಲಿ ಮಾರಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಬಂದಿದ್ದಲ್ಲಿ, ಈರೋಡ್ ಹಾಲನ್ನು ಬೆಂಗಳೂರು ನಗರದಲ್ಲಿ ಮಾರದಂತೆ ಸರ್ಕಾರ ಕೈಗೊಂಡ ಕ್ರಮ ಯಾವುದು?*

ಇ) *ತಡೆಗಟ್ಟಲು ವಿಫಲರಾದ ಎಷ್ಟು ಅಧಿಕಾರಿಗಳ ಮೇಲೆ ಇಲಾಖೆಯು ಕ್ರಮ ಕೈಗೊಂಡಿದೆ?*

ಶ್ರೀ ಎ. ಕೃಷ್ಣಪ್ಪ (ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು) :

ಅ) ನಿಜ, ಹಾಲು ಮಾರಾಟವು ಮುಂದುವರಿದಿದೆ. ಆದರೆ ಮಾದರಿ ಪರೀಕ್ಷೆಯನ್ನು ನಿಯತವಾಗಿ ನಡೆಸಲಾಗುತ್ತಿದೆ.

ಆ) ಮಾನ್ಯ ಮಂತ್ರಿಗಳು ಈರೋಡ್‌ನಿಂದ ಬರುತ್ತಿರುವ ಕಲಬೆರಕೆ ಹಾಲನ್ನು ಬೆಂಗಳೂರು ನಗರದಲ್ಲಿ ಮಾರಾಟ ಮಾಡದಂತೆ ತಡೆಗಟ್ಟುವುದರ ಬಗ್ಗೆ ಪ್ರಧಾನ ಕಾರ್ಯದರ್ಶಿಗಳು ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ, ಬೆಂಗಳೂರು ಮಹಾನಗರಪಾಲಿಕೆ, ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ ಮತ್ತು ಕರ್ನಾಟಕ ಹಾಲು ಮಹಾ ಮಂಡಳಿ ಹಾಗೂ ಬೆಂಗಳೂರು ಡೇರಿಯ ಹಿರಿಯ ಅಧಿಕಾರಿಗಳೊಡನೆ ದಿನಾಂಕ 10-5-2000 ರಂದು ಸಭೆ ನಡೆಸಿ ಸುದೀರ್ಘವಾಗಿ ಚರ್ಚಿಸಿ ಆಹಾರ ಕಲಬೆರಕೆ ನಿರೋಧಕ ಕಾಯ್ದೆ ಅನ್ವಯ ತೆಗೆದುಕೊಳ್ಳಬೇಕಾದ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ನಿರ್ದೇಶಿಸಿರುತ್ತಾರೆ. ಬೆಂಗಳೂರು ಮಹಾನಗರ ಪಾಲಿಕೆಯ ಆರೋಗ್ಯಾಧಿಕಾರಿಗಳು ಈರೋಡ್‌ನಿಂದ ಬರುವ ಹಾಲನ್ನು ಮಾದರಿ ಪರೀಕ್ಷೆ ನಡೆಸಿದ್ದು ಕಲಬೆರಕೆ ಕಂಡು ಬಂದ ಹಾಲಿನ ಮಾದರಿಯನ್ನು ಆಹಾರ ಕಲಬೆರಕೆ ನಿರೋಧಕ ಕಾಯ್ದಿಯಡಿಯಲ್ಲಿ (prevention of food adulteration Act) ದಾವೆ ಹಾಕಿರುತ್ತಾರೆ.

ಇ) ಉದ್ಭವಿಸುವುದಿಲ್ಲ.

ತುಮಕೂರು ಜಿಲ್ಲೆ ದೇವರಾಯನದುರ್ಗದ ಅರಣ್ಯ ಸಂರಕ್ಷಣೆ

3177 - ಶ್ರೀ ಕೆ.ಎನ್. ಸುಬ್ಬಾರೆಡ್ಡಿ (ಬಸವನಗುಡಿ) : ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ತುಮಕೂರು ಜಿಲ್ಲೆ ದೇವರಾಯನದುರ್ಗ ಅರಣ್ಯ ಭೂಮಿಯಲ್ಲಿ ಸ್ನಾತಕೋತ್ತರ ಕೇಂದ್ರ ಸ್ಥಾಪನೆಗೆ ಮಂಜೂರಾತಿ ನೀಡಲಾಗಿದೆಯೇ?*

ಆ) ಈ ಅರಣ್ಯ ಪ್ರದೇಶವನ್ನು ಸಂರಕ್ಷಿಸಿ, ಕಾಪಾಡುವ ಬದಲು, ಇದನ್ನು ಸ್ನಾತಕೋತ್ತರ ಕೇಂದ್ರ ಸ್ಥಾಪನೆಗೆ ನೀಡಿರುವುದು ಸಮಂಜಸವೇ?

ಇ) ಈ ಅರಣ್ಯ ಪ್ರದೇಶದ ಬದಲು ಬೇರೆ ಜಮೀನನ್ನು ನೀಡಲು ಸರ್ಕಾರದ ಉದ್ದೇಶವೇನಾದರೂ ಇದೆಯೇ?

ಶ್ರೀ ಕೆ.ಎಚ್. ರಂಗನಾಥ್ (ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು) :

ಅ) ಇಲ್ಲ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಅರಣ್ಯ ಇಲಾಖೆಯ ಗಮನಕ್ಕೆ ಈ ವಿಷಯ ಬಂದಿಲ್ಲ.

ರಾಜ್ಯದಲ್ಲಿ ಪ್ರವಾಸೋದ್ಯಮ ಅಭಿವೃದ್ಧಿ ಕುರಿತು

3178 - ಶ್ರೀ ಕೆ.ಎನ್. ಸುಬ್ಬಾರೆಡ್ಡಿ (ಬಸವನಗುಡಿ) : ಮಾನ್ಯ ಪ್ರವಾಸೋದ್ಯಮ ಹಾಗೂ ಹಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಪ್ರವಾಸೋದ್ಯಮವನ್ನು ಅಭಿವೃದ್ಧಿಗೊಳಿಸಲು ಸರ್ಕಾರ ಕೈಗೊಂಡ ಕ್ರಮವೇನು?

ಆ) ಪ್ರವಾಸೋದ್ಯಮ ಅಭಿವೃದ್ಧಿಗೆ ಸರ್ಕಾರವು ಮೀಸಲಿರಿಸಿದ ಮೊತ್ತವೆಷ್ಟು?

ಇ) ಬಸವನಗುಡಿ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಕೆಂಪಾಬುಧಿ ಕೆರೆ ಅಭಿವೃದ್ಧಿಗೆ ಸರ್ಕಾರ ಕೈಗೊಂಡ ಕ್ರಮಗಳೇನು?

ಈ) ಪ್ರವಾಸೋದ್ಯಮ ಇಲಾಖೆಯಿಂದ ಈ ವರ್ಷ ಸರ್ಕಾರಕ್ಕೆ ಬಂದ ಆದಾಯವೆಷ್ಟು?

ಶ್ರೀ ಆರ್. ರೋಷನ್ ಬೇಗ್ (ಪ್ರವಾಸೋದ್ಯಮ ಹಾಗೂ ಹಜ್ ಸಚಿವರು) :

ಅ) ರಾಜ್ಯದಲ್ಲಿ ಪ್ರವಾಸೋದ್ಯಮವನ್ನು ಅಭಿವೃದ್ಧಿಗೊಳಿಸಲು ಈ ಕೆಳಕಂಡ ಕ್ರಮಗಳನ್ನು ತೆಗೆದುಕೊಂಡಿದೆ.

1. ಪ್ರಮುಖ ಪ್ರವಾಸಿ ಕೇಂದ್ರಗಳಲ್ಲಿ ಮೂಲಭೂತ ಸೌಕರ್ಯ ಒದಗಿಸುವುದು.
2. ಹಾಲಿ ಇರುವ ಪ್ರವಾಸಿ ಸೌಲಭ್ಯಗಳ ಉನ್ನತೀಕರಣಗೊಳಿಸುವುದು.
3. ರಸ್ತೆ ಬದಿ ಸೌಲಭ್ಯಗಳು ಬಂದರೆ ಶೌಚಾಲಯ ಮತ್ತು ಕುಡಿಯುವ ನೀರಿನ ವ್ಯವಸ್ಥೆ ನಿರ್ಮಾಣ.
4. ವಸ್ತು ಪ್ರದರ್ಶನ ಮತ್ತು ಮೇಳಗಳಲ್ಲಿ ಭಾಗವಹಿಸುವುದರ ಮೂಲಕ ಪ್ರವಾಸಿ ಸ್ಥಳಗಳ ಹಾಗೂ ಪ್ರವಾಸಿ ಸೌಲಭ್ಯಗಳ ಬಗ್ಗೆ ಪ್ರವಾಸಿಗರಿಗೆ ಹೆಚ್ಚಿನ ಮಾಹಿತಿ ಒದಗಿಸುವುದು.
5. ಪ್ರವಾಸಿ ಮಾಹಿತಿ ಮತ್ತು ಕಾಯ್ದಿರಿಸುವ ಕೇಂದ್ರಗಳನ್ನು ದೇಶದ ಪ್ರಮುಖ ನಗರಗಳಲ್ಲಿ ತೆರೆಯುವುದು.